# ಬೆಂಗಳೂರು ವಿಶ್ವವಿದ್ಯಾಲಯ

ಸಂಖ್ಯೆ: ಎಸಿಎ-3/ಎ1/HMS/ಹೊ.ಕೋ.ಸಂ./2008-2009

ಜ್ಞಾನಭಾರತಿ
ಬೆಂಗಳೂರು-56
ದಿನಾಂಕ:28-1-2009

## ಅಧಿಸೂಚನೆ

**ವಿಷಯ :** 2008-09ನೇ ಶೈಕ್ಷಣಿಕ ಸಾಲಿಗೆ, ಬೆಂಗಳೂರಿನ **ಹಿಲ್ ಸೈಡ್ ಇನ್ಸಿಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್‌ಗೆ** ಎಂ.ಬಿ.ಎ. ಕೋರ್ಸಿನ ಹೊಸ ಸಂಯೋಜನೆ ನೀಡುವ ಬಗ್ಗೆ.

**ಉಲ್ಲೇಖ:** 1. ಸರ್ಕಾರದ ಪತ್ರದ ಸಂಖ್ಯೆ:ಇಡಿ:373:ಯುಬಿವಿ:2008 ದಿ:11-11-2008.
2 ಸಿಂಡಿಕೇಟ್ ಸಭೆಯ ನಿರ್ಣಯ ದಿನಾಂಕ:15-1-2009.

* * *

ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ **2000**ದ **59**ನೇ ಪ್ರಕರಣದ **11**ನೇ ಉಪಬಂಧದಲ್ಲಿ ಪ್ರದತ್ತವಾದ ಅಧಿಕಾರದನ್ವಯ ಬೆಂಗಳೂರು ವಿಶ್ವವಿದ್ಯಾಲಯವು **2008-2009**ನೇ ಸಾಲಿನಿಂದ ಅನ್ವಯವಾಗುವಂತೆ, ಬೆಂಗಳೂರಿನ **ಹಿಲ್ ಸೈಡ್ ಇನ್ಸಿಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್‌ಗೆ** ಕೆಳಗೆ ನಮೂದಿಸಿರುವ ಕೋರ್ಸನ್ನು ಹೊಸದಾಗಿ ಪ್ರಾರಂಭಿಸಲು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಸಂಯೋಜನೆಯನ್ನು ಮಂಜೂರು ಮಾಡಿದೆ.

| ಕೋರ್ಸ್ | ವಿಷಯ | ವಿದ್ಯಾರ್ಥಿ ಪ್ರಮಾಣ |
|---|---|---|
| ಎಂ.ಬಿ.ಎ. | ವಿಶ್ವವಿದ್ಯಾಲಯದ ಪರಿನಿಯಮಾವಳಿಯಂತೆ | 60(ಅರವತ್ತು) |

**ಷರತ್ತುಗಳು:**

1. ಕಾಲೇಜುಗಳಿಗೆ ಅನ್ವಯವಾಗುವ ಅನುದಾನ ಸಂಹಿತೆಯಲ್ಲಿ ಯಾವುದೇ ಉಪಬಂಧಗಳಿದ್ದರೂ ಮೇಲ್ಕಂಡ ಕೋರ್ಸಿಗೆ ಸರ್ಕಾರವು ಯಾವುದೇ ಕಾಲಕ್ಕೆ ಅನುದಾನವನ್ನು ಮಂಜೂರುಮಾಡುವುದಿಲ್ಲ. ಅದು ಶಾಶ್ವತ ಅನುದಾನ ರಹಿತ ಕೋರ್ಸ್ ಎಂದು ಪರಿಗಣಿಸತಕ್ಕದ್ದು.
2. ಜಾರಿಯಲ್ಲಿರುವ ಸರ್ಕಾರದ ನಿಯಮಾವಳಿ, ಆದೇಶಗಳು ಹಾಗೂ ವಿಶ್ವವಿದ್ಯಾಲಯದ ಅನುಶಾಸನ, ಪರಿನಿಯಮಾವಳಿ ಇತ್ಯಾದಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು;
3. ಎಂ.ಬಿ.ಎ. ಕೋರ್ಸಿಗೆ ಪ್ರತಿ ಶೈಕ್ಷಣಿಕ ವರ್ಷದ ಎ.ಐ.ಸಿ.ಟಿ.ಇ ಯ ವಿಸ್ತರಣಾ ಅನುಮೋದನೆಯನ್ನು ಕಡ್ಡಾಯವಾಗಿ ಪಡೆದುಕೊಳ್ಳತಕ್ಕದ್ದು.
4. ಎ.ಐ.ಸಿ.ಟಿ.ಇ, ನವದೆಹಲಿ, ಕರ್ನಾಟಕ ಸರ್ಕಾರ, ಹಾಗೂ ಬೆಂಗಳೂರು ವಿಶ್ವವಿದ್ಯಾಲಯದ ವಿಧಿಸಿರುವ /ವಿಧಿಸುವ ಷರತ್ತು ನಿಬಂಧನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
5. ಕೋರ್ಸಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಕರ್ನಾಟಕ ಎಂ.ಬಿ.ಎ. ಮತ್ತು ಎಂ.ಸಿ.ಎ. ಕೋರ್ಸುಗಳ ಅಭ್ಯರ್ಥಿಗಳ ಆಯ್ಕೆ ನಿಯಮಗಳನ್ವಯ ಮಾತ್ರ ಪಡೆಯತಕ್ಕದು
6. ಸದರಿ ಕೋರ್ಸಿಗೆ ವಿಶ್ವವಿದ್ಯಾಲಯದ ಪೂರ್ವಾನುಮತಿಯಿಲ್ಲದೆ ಶಾಖೆಗಳನ್ನು ಹೆಚ್ಚಿಸಬಾರದು.
7. ಸದರಿ ಕೋರ್ಸಿಗೆ ವಿದ್ಯಾರ್ಥಿಗಳ ಪ್ರವೇಶ ಕಲ್ಪಿಸುವಾಗ ಸರ್ಕಾರದಿಂದ ಆಗಿಂದಾಗ್ಗೆ ಹೊರಡಿಸುವ ಮೀಸಲಾತಿ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
8. ಸ್ಥಳೀಯ ವಿಚಾರಣಾ ಸಮಿತಿಯು ವಿಧಿಸಿರುವ ಪ್ರತಿಯೊಂದು ಷರತ್ತನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
9. ವಿಶ್ವವಿದ್ಯಾಲಯವು, ಕಾಲೇಜಿನ ವಿದ್ಯಾರ್ಥಿಗಳು, ಬೋಧಕರು ಹಾಗೂ ಬೋಧಕೇತರ ನೌಕರರ ಬಗ್ಗೆ ಕಾಲಕಾಲಕ್ಕೆ ಹೊರಡಿಸುವ ನಿಯಮಾವಳಿ/ಪರಿನಿಯಮಾವಳಿ ಮತ್ತು ಆದೇಶಗಳನ್ನು ಕಾಲೇಜು ಪಾಲಿಸತಕ್ಕದ್ದು. ಕಾಲೇಜು, ವಿಶ್ವವಿದ್ಯಾಲಯದ ಸಂಯೋಜನಾ ಅಧಿಸೂಚನೆಗನುಗುಣವಾಗಿ ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರದಂತೆ ಹಾಗೂ ವಿಶ್ವವಿದ್ಯಾಲಯವು ಕೋರ್ಸುಗಳಿಗೆ ನಿಗಧಿಪಡಿಸಿರುವ ಅರ್ಹತಾ ನಿಯಮಾವಳಿಗಳನ್ನು ಉಲ್ಲಂಘಿಸದಂತೆ ಕೋರ್ಸುಗಳಿಗೆ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಳ್ಳತ್ತಕ್ಕದ್ದು. ಕೋರ್ಸುಗಳಿಗೆ ನಿಗಧಿಪಡಿಸಿರುವ ವಿದ್ಯಾರ್ಥಿ ಪ್ರಮಾಣವನ್ನು ಮೀರಿ ವಿದ್ಯಾರ್ಥಿಗಳ ಪ್ರವೇಶವನ್ನು ಮಾಡಿಸಿಕೊಂಡಲ್ಲಿ ಸಂಯೋಜನೆಯನ್ನು ರದ್ದುಪಡಿಸಲಾಗುವುದು.

. . 2 . . .

10. ಕಾಲೇಜು/ಆಡಳಿತ ಮಂಡಳಿ ಶೇ.50ರಷ್ಟು ವಿಶ್ವವಿದ್ಯಾಲಯ ಕೋಟಾವನ್ನು (ಎಲ್ಲಿ ಅನ್ವಯವಾಗುತ್ತದೆಯೋ ಅಲ್ಲಿ) ವಿಶ್ವವಿದ್ಯಾಲಯದ ನಿಯಮಾವಳಿಯ ಪ್ರಕಾರ ನಿಗಧಿಪಡಿಸತಕ್ಕದ್ದು; ಮತ್ತು ಕಾಲಕಾಲಕ್ಕೆ ವಿಶ್ವವಿದ್ಯಾಲಯವು ನಿಗಧಿಪಡಿಸುವ ಶುಲ್ಕವನ್ನು ಮಾತ್ರ ವಸೂಲುಮಾಡತಕ್ಕದ್ದು. ವಿಶ್ವವಿದ್ಯಾಲಯವು ನಿಗಧಿಪಡಿಸಿದ ಶುಲ್ಕ/ಮೊತ್ತಕ್ಕಿಂತ ಬೇರೆ ಹೆಚ್ಚಿನ ಮೊತ್ತವನ್ನು ವಸೂಲು ಮಾಡತಕ್ಕದ್ದಲ್ಲ.
11. ಕಾಲೇಜು, ಕೋರ್ಸುಗಳ ಶಿಕ್ಷಣ ಕ್ರಮವನ್ನು, ವಿದ್ಯಾರ್ಥಿಗಳ ಶೈಕ್ಷಣಿಕವಾಗಿ ಅಭಿವೃದ್ಧಿಗೊಳಿಸುವ ಮಟ್ಟಕ್ಕೆ ಉತ್ತಮಪಡಿಸತಕ್ಕದ್ದು. ವಿದ್ಯಾರ್ಥಿಗಳನ್ನು, ಸೇವೆಯಲ್ಲಿರುವ ಬೋಧಕರುಗಳನ್ನು ಪ್ರಾಂಶುಪಾಲರು/ಆಡಳಿತ ಮಂಡಳಿಯವರು ಸಹಾನುಭೂತಿಯಿಂದ ನೋಡಿಕೊಳ್ಳತಕ್ಕದ್ದು.
12. **ವೈಶಾಕ V/S ರಾಜಸ್ಥಾನದ ರಾಜ್ಯ ಸರ್ಕಾರದ ಮೊಕದ್ದಮೆಗೆ ಸಂಬಂಧಿಸಿದಂತೆ, ದಿನಾಂಕ:13-8-1997ರ ಸರ್ವೋಚ್ಚ ನ್ಯಾಯಾಲಯದ ತೀರ್ಪಿನಂತೆ, ಕಾಲೇಜು ಅಥವಾ ಕಛೇರಿ, ಕೆಲಸ ನಿರ್ವಹಿಸುವ ಸ್ಥಳಗಳಲ್ಲಿ, ಯಾವುದೇ ವ್ಯಕ್ತಿ/ವಿದ್ಯಾರ್ಥಿ, ಗಲಭೆಯನ್ನು ಉಂಟುಮಾಡುವುದಾಗಲೀ ಅಥವಾ ಯಾವುದೇ ವ್ಯಕ್ತಿಯಿಂದ(ಬೋಧಕ/ ಬೋಧಕೇತರ/ ಆಡಳಿತಮಂಡಳಿ) ಅಥವಾ ವಿದ್ಯಾರ್ಥಿಯಿಂದ ಮಹಿಳೆಯರಿಗೆ/ವಿದ್ಯಾರ್ಥಿನಿಯರಿಗೆ ಯಾವುದೇ ರೀತಿಯ ಕಿರುಕಳ, ಲೈಂಗಿಕ ಕಿರುಕಳ ನೀಡುವುದು ಶಿಕ್ಷಾರ್ಹ ಅಪರಾಧವಾಗಿದೆ. ಯಾವುದೇ ವ್ಯಕ್ತಿ/ವಿದ್ಯಾರ್ಥಿ ಈ ರೀತಿಯಾದ ಚುಟುವಟಿಕೆಗಳಲ್ಲಿ ಭಾಗಿಯಾಗಿದ್ದಲ್ಲಿ ಅಂತಹವರನ್ನು ಕೆಲಸದಿಂದ/ ವಿದ್ಯಾರ್ಥಿದೆಸೆಯಿಂದ ವಿಮುಕ್ತಿಗೊಳಿಸಬಹುದಾಗಿದೆ. ಕಾಲೇಜು ಈ ರೀತಿಯ ಅಪರಾದಗಳನ್ನು/ಚಟುವಟಿಕೆಗಳನ್ನು ಮಟ್ಟಹಾಕಲು ಸರ್ವೋಚ್ಚ ನ್ಯಾಯಲಯದ ಆದೇಶದಂತೆ ದೂರು ಸಮಿತಿಯನ್ನು ಸ್ಥಾಪನೆ ಮಾಡತಕ್ಕದ್ದು, ಇಂತಹ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಜರುಗಿಸತಕ್ಕದ್ದು.**
13. ಕಾಲೇಜು ವಿನಾಕಾರಣ ವಿದ್ಯಾರ್ಥಿಗಳ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು ಆರು ತಿಂಗಳ ಅವಧಿ ಮೀರದಂತೆ ತಮ್ಮಲ್ಲಿಯೇ ಇಟ್ಟುಕೊಳ್ಳತಕ್ಕದ್ದಲ್ಲ, ಪ್ರವೇಶ ಅನುಮೋದನೆಗಾಗಿ ಸಲ್ಲಿಸಿರುವ ಅಂಕಪಟ್ಟಿ ಹಾಗೂ ಇತರೇ ದಾಖಲೆಗಳನ್ನು, ಪ್ರವೇಶ ಅನುಮೋದನೆಯಾದ ನಂತರ ವಿದ್ಯಾರ್ಥಿಗಳಿಗೆ ತ್ವರಿತವಾಗಿ ಅವಗಿಗೆ ವಿತರಣೆಯನ್ನು ಮಾಡಿ ವಿಶ್ವವಿದ್ಯಾಲಯಕ್ಕೆ ತಿಳಿಸತಕ್ಕದ್ದು.
14. ವಿದ್ಯಾರ್ಥಿಗಳು, ವರ್ಗಾವಣೆ ಪತ್ರವನ್ನು ನೀಡುವ ಬಗ್ಗೆ ಮನವಿ ಸಲ್ಲಿಸಿದಲ್ಲಿ, ಕಾಲೇಜು ವಿದ್ಯಾರ್ಥಿಗಳಿಗೆ ಯಾವುದೇ ತೊಂದರೆ ನೀಡದೆ, ವರ್ಗಾವಣೆ ಪತ್ರವನ್ನು ನೀಡತಕ್ಕದ್ದು. ಈ ಬಗ್ಗೆ ಆ ವರ್ಷದ/ಸೆಮಿಸ್ಟರ್‌ನ ಪೂರ್ಣವಾಗದ ಅವಧಿಯ ಬೋಧನಾ ಶುಲ್ಕವನ್ನು ಹೊರತುಪಡಿಸಿ, ಯಾವುದೇ ಹೆಚ್ಚುವರಿ ಶುಲ್ಕವನ್ನು ವಸೂಲಿ ಮಾಡಲು ನಿಯಮಾವಳಿ ಪ್ರಕಾರ ಅನುಮತಿ ಇರುವುದಿಲ್ಲ.
15. ಯಾವುದೇ ರೀತಿಯಾದ ಕ್ಯಾಪಿಟೇಷನ್ ಶುಲ್ಕವನ್ನು ಕಾಲೇಜು ವಸೂಲಿ ಮಾಡತಕ್ಕದ್ದಲ್ಲ.
16. ಪ್ರವೇಶಾತಿಯಲ್ಲಿ ರೋಸ್ಟರ್ ಪದ್ಧತಿಯನ್ನು ಕಟ್ಟುನಿಟ್ಟಾಗಿ ಪಾಲಿಸತಕ್ಕದ್ದು.
17. 2009-2010ನೇ ಶೈಕ್ಷಣಿಕ ಸಾಲಿಗೆ ಕೋರ್ಸಿನ ಸಂಯೋಜನಾ ನವೀಕರಣಕ್ಕಾಗಿ ಅರ್ಜಿಯನ್ನು ಒಂದು ವಾರದೊಳಗಾಗಿ ವಿಶ್ವವಿದ್ಯಾಲಯಕ್ಕೆ ತಪ್ಪದೆ ಸಲ್ಲಿಸತಕ್ಕದ್ದು.

ಆಜ್ಞೆ ಮೇರೆಗೆ

**ಕುಲಸಚಿವರು**
30/1/09

ಗೆ,

**ಪ್ರಾಂಶುಪಾಲರು,**
**ಹಿಲ್ ಸೈಡ್ ಇನ್ಸಿಟಿಟ್ಯೂಟ್ ಆಫ್ ಮ್ಯಾನೇಜ್‌ಮೆಂಟ್,**
**ನಂ.9, ರಘುವನಹಳ್ಳಿ, ಕನಕಪುರ ಮುಖ್ಯರಸ್ತೆ, ಬೆಂಗಳೂರು-560 062.**

ಪ್ರತಿಗಳು:

1. ಪ್ರಧಾನ ಕಾರ್ಯದರ್ಶಿಯವರು, ಉನ್ನತ ಶಿಕ್ಷಣ ಇಲಾಖೆ, ಡಾ।। ಅಂಬೇಡ್ಕರ್ ವೀಧಿ, ಬೆಂಗಳೂರು-1
2. ನಿರ್ದೇಶಕರು, ಶಿಕ್ಷಣ ಆಯುಕ್ತರು, ಬೆಂಗಳೂರು-1.
3. ಕುಲಸಚಿವರು (ಮೌಲ್ಯಮಾಪನ), ಬೆಂ. ವಿ., ಬೆಂಗಳೂರು-1
4. ಉಪ.ಕುಲಸಚಿವರು : ಅಧೀಕ್ಷಕರು ಶೈಕ್ಷಣಿಕ ವಿಭಾಗ-4. ಬೆಂ. ವಿ. ಬೆಂಗಳೂರು-56.
5. ಕೋಆರ್ಡಿನೇಟರ್, ಪ್ರಸಾರಾಂಗ ಮಾರಾಟ ವಿಭಾಗ, ಬೆಂ.ವಿ.-ಕಾಲೇಜಿನವರಿಗೆ ಒಂದು ಸಂ.ನ. ಅರ್ಜಿಯನ್ನು ನೀಡಲು.